# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 05/12/2020 ರ
# ಸಭಾ ನಡವಳಿ

ದಿನಾಂಕ: 05/12/2020 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳಿ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀಮತಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ ಗೋವಿಂದರಾಜು | ವಲಯ ಅರಣ್ಯ ಅಧಿಕಾರಿಗಳು, ರಾ.ರಾ.ನಗರ ವಲಯ |
| 5 | ಶ್ರೀ ಸಾಯಿ ಸಂದೇಶ್ ಬಿ.ಎಸ್. | ಸಹಾಯಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ |
| 6 | ಶ್ರೀ ಸಿ.ಕೆ. ಬಸವೇಗೌಡ | ಕಂದಾಯ ಪರಿವೀಕ್ಷಕರು |
| 7 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್. ಎಸ್.ಬಿ. |

Scanned with CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾರ್ಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.

❖ **ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯ ವಿದ್ಯುತ್ ತಂತಿಗಳ ಕೆಳಗೆ ಬೆಳೆದಿರುವಂತಹ ಮರಗಳನ್ನು ಕತ್ತರಿಸಲು ಹಾಗೂ ಬೀಳುವ ಸ್ಥಿತಿಯಲ್ಲಿರುವ ಮರಗಳನ್ನು ತೆರವುಗೊಳಿಸಲು ಹಾಗೂ ಬಿ.ಹೆಚ್.ಇ.ಎಲ್. 18ನೇ ಕ್ರಾಸ್‌ನಲ್ಲಿರುವ ಹೊಂಗೆ ಮರವನ್ನು ತೆರವುಗೊಳಿಸಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಪಾಲಿಕೆಯ ವಲಯ ಅರಣ್ಯ ಅಧಿಕಾರಿಗಳು ಮಾತನಾಡಿ ಹೊಂಗೆ ಮರದ ಕೊಂಬೆಗಳನ್ನು ಕತ್ತರಿಸಲು ಮಾತ್ರ ಅವಕಾಶವಿದ್ದು ಮರವನ್ನು ತೆರುವುಗೊಳಿಸಲು ಸಾಧ್ಯವಿಲ್ಲವೆಂದು ಸಭೆಗೆ ತಿಳಿಸುತ್ತಾ, ವಿದ್ಯುತ್ ತಂತಿಗಳ ಕೆಳಗಡೆ ಬೆಳೆದಿರುವ ಮರಗಳನ್ನು ತೆರವುಗೊಳಿಸುವ ಕಾರ್ಯವು ಬೆಸ್ಕಾಂ ವ್ಯಾಪ್ತಿಗೆ ಬರುವುದಾಗಿದ್ದು, ಉಳಿದಂತೆ ಬೀಳುವ ಸ್ಥಿತಿಯಲ್ಲಿರುವ ಮರಗಳನ್ನು ತೆರವುಗೊಳಿಸಲು ಸ್ಥಳದ ವಿವರದೊಂದಿಗೆ ಮನವಿಯನ್ನು ಸಲ್ಲಿಸಲು ಸೂಚಿಸಿದರು.

Scanned with CamScanner

❖ **<u>ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ:-</u>** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ವೃಷಭಾವತಿ ನದಿಗೆ ತಡೆಗೋಡೆ ನಿರ್ಮಾಣ ಮಾಡಿದ್ದು, ತಡೆಗೋಡೆಯ ಪಕ್ಕದಲ್ಲಿ ಉಳಿದಿರುವ ಜಾಗವನ್ನು ರಸ್ತೆಯನ್ನಾಗಿ ಮಾಡಲು ಹಾಗೂ ಮೈಲಸಂದ್ರ ಕೆರೆಗೆ ನೀರು ಹರಿದು ಬರುವ ರಾಜ ಕಾಲುವೆಯನ್ನು ಅಭಿವೃದ್ಧಿ ಪಡಿಸಲು ಮತ್ತು ಹೆಚ್.ಕೆ. ಆಸ್ಪತ್ರೆ ಹಿಂಭಾಗ ತಡೆಗೋಡೆ ನಿರ್ಮಾಣ ಮಾಡಲು ಕೋರಲಾಯಿತು. ಈ ಸಂಬಂಧ ಬೃಹತ್ ನೀರುಗಾಲುವೆಯ ಅಧಿಕಾರಿಗಳು ಮಾತನಾಡಿ ತಡೆಗೋಡೆಯ ಪಕ್ಕದಲ್ಲಿ ರಸ್ತೆಯನ್ನು ನಿರ್ಮಾಣ ಮಾಡುವ ಸಂಬಂಧ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದೆಂದು ಮತ್ತು ಹೆಚ್.ಕೆ. ಆಸ್ಪತ್ರೆ ಹಿಂಭಾಗ ತಡೆಗೋಡೆ ಕಾಮಗಾರಿಯನ್ನು ನಿರ್ಮಾಣ ಮಾಡಲಾಗುವುದೆಂದು ಮತ್ತು ಮೈಲಸಂದ್ರ ಕೆರೆಗೆ ನೀರು ಬರುವ ಕಾಲುವೆಯನ್ನು ಸ್ವಚ್ಛಗೊಳಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ **<u>ಅರಣ್ಯ ವಿಭಾಗ, ಬಿಬಿಎಂಪಿ:-</u>** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಅತಿ ಎತ್ತರದ ಒಣಗಿದ ಮರವು ವಿದ್ಯುತ್ ತಂತಿಯ ಮೇಲೆ ಬಿದ್ದು, ಅನಾಹುತ ಸಂಭವಿಸುವ ಸಾಧ್ಯತೆ ಇದ್ದು ಸದರಿ ಮರವನ್ನು ತೆರವುಗೊಳಿಸುವಂತೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಅರಣ್ಯ ವಿಭಾಗದ ಅಧಿಕಾರಿಗಳು ಎಲ್ಲಾ ಸಭೆಗಳಿಗೆ ಗೈರು ಹಾಜರಾಗಿರುವುದನ್ನು ನೋಡಲ್ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಯಿತು.

❖ **<u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ:-</u>** ವಾರ್ಡ್ ನಂ.198ರಲ್ಲಿ ಪಾದಾಚಾರಿ ಮಾರ್ಗಗಳನ್ನು ಅಭಿವೃದ್ಧಿಪಡಿಸುವ ಹಾಗೂ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡುವ ಸಂಬಂಧ ಪ್ರಸ್ತಾವನೆಯನ್ನು ಸಲ್ಲಿಸಬೇಕಾಗಿರುವ ಬಗ್ಗೆ ನೋಡಲ್ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಬಡಾವಣೆಗಳ ನಾಗರೀಕರು ಮಾತನಾಡಿ ಮುಂದಿನ ಸಭೆಯಲ್ಲಿ ಅಗತ್ಯವಿರುವ ಸ್ಥಳಗಳನ್ನು ಹಾಗೂ ರಸ್ತೆಗಳನ್ನು ಗುರುತಿಸಿ ಸಭೆಗೆ ಮಾಹಿತಿ ನೀಡಲಾಗುವುದೆಂದು ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

Scanned with CamScanner

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner